ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

---

**ಸಂಖ್ಯೆ : ವಾಇ : ಜಂ ನಿ : ಸುಮಪ : 2021–22** **ದಿನಾಂಕ : 13–09–2021**

# ಪತ್ರಿಕಾ ಪ್ರಕಟಣೆ

**PRESS RELEASE**

ಇತ್ತೀಚಿಗೆ ಅಗಲಿದ ಗಣ್ಯರಿಗೆ ಸಂತಾಪ

ಬೆಂಗಳೂರು, ಸೆಪ್ಟೆಂಬರ್ 13, (ಕರ್ನಾಟಕ ವಾರ್ತೆ):

ಇಂದು ಆರಂಭದಲ್ಲಿ ವಿಧಾನಸಭೆಯ ಅಧಿವೇಶನದ ಪ್ರಾರಂಭದಲ್ಲಿ ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ಇತ್ತೀಚೆಗೆ ಅಗಲಿದ ಗಣ್ಯರಿಗೆ ಸಂತಾಪ ಸೂಚಿಸಿದರು.

ಇತ್ತೀಚಿಗೆ ಅಗಲಿದೆ ಮಾಜಿ ಸಚಿವರು ಹಾಗೂ ಶಾಸಕರಾದ ಸಿ.ಎಂ. ಉದಾಸಿ, ಮಾಜಿ ಉಪಕುಲಪತಿ ಎಂ.ಐ. ಸವದತ್ತಿ, ಮಾಜಿ ವಿಧಾನ ಸಭಾಧ್ಯಕ್ಷ ಕೃಷ್ಣ, ಉತ್ತರ ಪ್ರದೇಶದ ಮಾಜಿ ಮುಖ್ಯಮಂತ್ರಿ ಕಲ್ಯಾಣ್ ಸಿಂಗ್, ಕೇಂದ್ರದ ಮಾಜಿ ಸಚಿವ ಬಾಬಾಗೌಡ ರುದ್ರಗೌಡ ಪಾಟೀಲ್, ವಿಧಾನ ಸಭೆಯ ಮಾಜಿ ಸದಸ್ಯ ಜಿ. ಮಾದೇಗೌಡ, ಮಾಜಿ ಸಚಿವರು, ಸಂಸದರು ವಿಧಾನ ಸಭೆ ಹಾಗೂ ವಿಧಾನ ಪರಿಷತ್ತಿನ ಮಾಜಿ ಸದಸ್ಯರಾದ ಕೆ.ಬಿ.ಶಾಣಪ್ಪ, ಪ್ರೊ. ಮಮ್ತಾಜ್ ಆಲಿಖಾನ್, ಮಾಜಿ ಸಚಿವ ಎ.ಕೆ. ಅಬ್ದುಲ್ ಸಮದ್, ಮಾಜಿ ಸಂಸದ ಸಿದ್ನಾಳು, ರಾಜ್ಯ ಸಭೆಯ ಮಾಜಿ ಸದಸ್ಯ ಎಂ. ರಾಜಗೋಪಾಲ್, ಸಾಹಿತಿ ಹಾಗೂ ವಿಧಾನ ಪರಿಷತ್ತಿನ ಮಾಜಿ ಸದಸ್ಯ ಡಾ: ಸಿದ್ಧಲಿಂಗಯ್ಯ, ಮಾಜಿ ಶಾಸಸಕರಾದ ರೇವಣ್ಣ ಸಿದ್ದಪ್ಪ ಕಲ್ಲೂರ್, ವಿಧಾನ ಸಭೆಯ ಮಾಜಿ ಸದಸ್ಯರುಗಳಾದ ಡಾ: ಚಿತ್ತರಂಜನ್ ಕಲ್ಲುಕೋಟಿ, ಜೇಕಪ್, ಸಯ್ಯದ್ ಜುಲ್ಫಿಕರ್ ಹಶ್ಮಿ, ಮಹಮದ್ ಲೈಕೋದ್ದೀನ್, ಮನೋಹರ್ ಕಟ್ಟಿಮನಿ, ಎನ್.ಎಸ್.ಖೇಡ್, ರಾಜಶೇಖರ್ ಸಿಂಧೂರ, ಸ್ವಾತಂತ್ರ್ಯ ಹೋರಾಟಗಾರರಾದ ಸದಾಶಿವರಾವ್ ಬಾಪೂ ಸಾಹೇಬ ಬೋಸ್ಲೆ, ಸೂರಂ ರಾಮಯ್ಯ, ಹೆಚ್.ಎಸ್. ದೊರೆಸ್ವಾಮಿ, ಕನ್ನಡ ನಿಘಂಟು ತಜ್ಞ ಪ್ರೊ. ಜಿ. ವೆಂಕಟ ಸುಬ್ಬಯ್ಯ, , ಹಿರಿಯ ಪತ್ರಕರ್ತರಾಗಿದ್ದ ಮಹದೇವ ಪ್ರಕಾಶ್, ಯಕ್ಷಗಾನ ಅಕಾಡೆಮಿ ಅಧ್ಯಕ್ಷರಾಗಿದ್ದ ಪ್ರೊ. ಎಂ. ಎ. ಹೆಗಡೆ, ಪರಿಸರ ಹೋರಾಟಗಾರ ಡಾ: ಸುಂದರ್ ಬಹುಗುಣ, ಮಿಂಚಿನ ಓಟಗಾರ ಎಂದು ಖ್ಯಾತಿ ಪಡೆದಿದ್ದ ಕ್ರೀಡಾಪಟು ಮಿಲ್ಕಾಸಿಂಗ್, ಹಿರಿಯ ನಟಿ ಶ್ರೀಮತಿ ಜಯಂತಿ, ಮಠಾಧೀಶರಾದ ವಿದ್ಯಾದಿರಾಜ ತೀರ್ಥ ಶ್ರೀಪಾದ ಒಡೆಯರ್, ಹಿರಿಯ ಸಾಹಿತಿ ಡಾ: ವಸಂತ ಕುಷ್ಟಗಿ, ಸರ್ವೋಚ್ಛ ನ್ಯಾಯಾಲಯದ ನ್ಯಾಯಾಧೀಶರಾಗಿದ್ದ ಮೋಹನ್ ಮಲ್ಲಿಕಾರ್ಜುನ ಶಾಂತನ ಗೌಡ ರವರಿಗೆ ಸಂತಾಪ ಸಲ್ಲಿಸಿ, ಕೋವಿಡ್ ಸಾಂಕ್ರಾಮಿಕ ರೋಗ ಹಾಗೂ ಪ್ರವಾಹದಿಂದ ಅಗಲಿದವರಿಗೂ ಸಂತಾಪ ಸೂಚಿಸಿದರು. ಕೋವಿಡ್‌ನಂತಹ ಸಾಂಕ್ರಾಮಿಕ ರೋಗದ ಸಂದರ್ಭದಲ್ಲಿ ಸೇವೆ ಸಲ್ಲಿಸಿದ ವೈದ್ಯರಿಗೆ ಗೌರವ ಸಲ್ಲಿಸಿದರು.

ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಅಗಲಿದ ಗಣ್ಯರಿಗೆ ಸಂತಾಪ ಸೂಚಿಸಿ ಹಲವಾರು ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರು ನಮ್ಮನ್ನು ಅಗಲಿದ್ದು, ಅವರ ಅಗಲಿಕೆ ತುಂಬಲಾರದ ನಷ್ಟ. ಅವರುಗಳ ಸೇವೆಯನ್ನು ಪುನ: ನೆನಪು ಮಾಡಿಕೊಂಡು ಅವರಿಗೆ ಶ್ರದ್ಧಾಂಜಲಿ ಅರ್ಪಿಸಿ, ಅವರ ಕುಟುಂಬ ವರ್ಗದವರಿಗೆ ಅಗಲಿಕೆಯ ನೋವನ್ನು ಭರಿಸುವ ಶಕ್ತಿ ನೀಡಲಿ ಹೇಳಿದರು.

ತದನಚಿತರ ವಿರೋಧ ಪಕ್ಷದ ನಾಯಕ ಸಿದ್ದರಾಮಯ್ಯ, ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಸೇರಿದಂತೆ ಅನೇಕ ಸಚಿವರು ಮಾತನಾಡಿ ಅಗಲಿದ ಗಣ್ಯರಿಗೆ ಸಂತಾಪ ಸೂಚಿಸಿದರು.

.

## ವಿಧಾನ ಪರಿಷತ್ ಅಧಿವೇಶನ – ಅಗಲಿದ ಗಣ್ಯರಿಗೆ ಸಂತಾಪ

ಬೆಂಗಳೂರು, ಸೆಪ್ಟೆಂಬರ್ 13, (ಕರ್ನಾಟಕ ವಾರ್ತೆ):

ಕೋವಿಡ್ – 19ರ 2ನೇ ಅಲೆಯ ಭೀಕರ ಖಾಯಿಲೆಗೆ ಸಹಸ್ರಾರು ನಾಗರೀಕರು ಸಾವನಪ್ಪಿರುವುದು ಅತ್ಯಂತ ದು:ಖಕರ ಸಂಗತಿ ಎಂದು ಮಾನ್ಯ ಸಭಾಪತಿಗಳು ಸದನದಲ್ಲಿ ಇಂದು ತಿಳಿಸಿದರು.

ಇಂದು ಆರಂಭವಾದ ವಿಧಾನಪರಿಷತ್ತಿನ ಅಧಿವೇಶನದಲ್ಲಿ ಅಗಲಿದ ಗಣ್ಯರಾದ ಮಾಜಿ ಸಚಿವರು, ಮಾಜಿ ಸಂಸದರು, ವಿಧಾನಸಭೆ ಹಾಗೂ ವಿಧನ ಪರಿಷತ್ತಿನ ಮಾಜಿ ಸದಸ್ಯರಾಗಿದ್ದ ಕಮಲಾರ ಭೀಮಶಾ ಶಾಣಪ್ಪ, ಮಾಜಿ ಸಚಿವರು ಹಾಗೂ ವಿಧಾನ ಪರಿಷತ್ತಿನ ಮಾಜಿ ಸದಸ್ಯರಾಗಿದ್ದ ಡಾ: ಮುಮ್ತಾಜ್ ಅಲಿ ಖಾನ್, ವಿಧಾನ ಪರಿಷತ್ತಿನ ಮಾಜಿ ಸದಸ್ಯರು ಹಾಗೂ ಕವಿಗಳಾಗಿದ್ದ, ಡಾ. ಸಿದ್ದಲಿಂಗಯ್ಯ, ವಿಧಾನ ಪರಿಷತ್ತಿನ ಮಾಜಿ ಸದಸ್ಯರಾಗಿದ್ದ, ಎಸ್. ಎಂ. ಆನಂದ್, ಮಾಜಿ ಸಚಿವರು ಹಾಗೂ ಹಾಲಿ ವಿಧಾನಸಭೆಯ ಸದಸ್ಯರಾಗಿದ್ದ ಉದಾಸಿ ಚನ್ನಬಸಪ್ಪ ಮಹಾಲಿಂಗಪ್ಪ, ವಿಧಾನ ಸಭೆಯ ಮಾಜಿ ಸಭಾಧ್ಯಕ್ಷರು, ಮಾಜಿ ಸಚಿವರು ಹಾಗೂ ಮಾಜಿ ಸಂಸದರಾಗಿದ್ದ ಕೃಷ್ಣ, ಮಾಜಿ ಸಂಸದರು, ಮಾಜಿ ಸಚಿವರು ಹಾಗೂ ವಿಧಾನ ಸಭೆಯ ಮಾಜಿ ಸದಸ್ಯರಾಗಿದ್ದ ಡಾ. ಜಿ. ಮಾದೇಗೌಡ, ಮಾಜಿ ಸಂಸದರಾಗಿದ್ದ ಷಣ್ಮುಖಪ್ಪ ಬಸಪ್ಪ ಸಿದ್ನಾಳ, ಮಾಜಿ ಸಂಸದರಾಗಿದ್ದ ಎಂ ರಾಜಗೋಪಾಲ, ಕೇಂದ್ರದ ಮಾಜಿ ಸಚಿವರು ಹಾಗೂ ವಿಧಾನ ಸಭೆಯ ಮಾಜಿ ಸದಸ್ಯರಾಗಿದ್ದ ಬಾಬಾಗೌಡ ರುದ್ರಗೌಡ ಪಾಟೀಲ್, ಮಾಜಿ ಸಚಿವರು ಹಾಗೂ ವಿಧಾನಸಭೆಯ ಮಾಜಿ ಸದಸ್ಯರಾಗಿದ್ದ ಎ.ಕೆ. ಅಬ್ದುಲ್ ಸಮದ್, ಕನ್ನಡ ನಿಘಂಟು ತಜ್ಞರಾದ ಪ್ರೊ.ಜಿ. ವೆಂಕಟಸುಬ್ಬಯ್ಯ, ಹಿರಿಯ ಕವಿ ಜರಗನಹಳ್ಳಿ ಶಿವಶಂಕರ್, ಶಿಲ್ಪಕಲಾವಿದ ಷಣ್ಮುಖಪ್ಪ ಕಾಶಪ್ಪ ಯರಕರ, ಚಲನಚಿತ್ರ ನಟರಾದ ಅರವಿಂದ, ಯುವ ಚಲನಚಿತ್ರ ನಟ ಸಂಚಾರಿ ವಿಜಯ್, ಹಿರಿಯ ಶಿಲ್ಪ ಕಲಾವಿದೆ ಕನಕಮೂರ್ತಿ ಹಿರಿಯ ವಿದ್ವಾಂಸ ಡಾ. ಲಕ್ಷ್ಮಿತಾತಾಚಾರ್, ನೃತ್ಯ ಕಲಾವಿದೆ ಬಿ. ಭಾನುಮತಿ, ಹಿರಿಯ ತಜ್ಞ ವೈದ್ಯ ಡಾ. ಅಶೋಕ ರಾಮಣ್ಣ ಸೊನ್ನದ, ಸ್ವಾತಂತ್ರ್ಯ ಹೋರಾಟಗಾರ ಹಾರೋಹಳ್ಳಿ ಶ್ರೀನಿವಾಸಯ್ಯ ದೊರೆಸ್ವಾಮಿ, ಹಿರಿಯ ಸಾಹಿತಿ ಪ್ರೊ. ವಸಂತ ಕುಷ್ಟಗಿ, ಹಿರಿಯ ಶಿಕ್ಷಣ ತಜ್ಞ ಪ್ರೊ. ಎಂ.ಐ. ಸವದತ್ತಿ ಹಿರಿಯ ಚಲನಚಿತ್ರ ನಟಿ ಜಯಂತಿ, ಖ್ಯಾತ ವೈದ್ಯೆ ಹಾಗೂ ಲೇಖಕಿ ಡಾ. ಹೆಚ್. ಗಿರಿಜಮ್ಮ ಅವರುಗಳ ನಿಧನಕ್ಕ ಸಂತಾಪ ಸೂಚಿಸಿ ಎರಡು ನಿಮಿಷಗಳ ಮೌನಾಚರಣೆ ಮಾಡಿದರು.

ರಾಜ್ಯದ ಹಾಗೂ ರಾಷ್ಟ್ರದ, ರಾಜಕೀಯ ಕ್ಷೇತ್ರ, ಸಾಹಿತ್ಯ ಕ್ಷೇತ್ರ, ವಿಜ್ಞಾನ ಕ್ಷೇತ್ರ ಮತ್ತು ಸಮಾಜ ಸೇವೆಯಲ್ಲಿ ತೊಡಗಿದ್ದ, ಹಲವಾರು ಖ್ಯಾತನಾಮರು ಮೃತಪಟ್ಟಿರುವುದು ಹಾಗೂ ಕೋವಿಡ್ ವಾರಿಯರ್ಸ್‌ಗಳು ಸೇರಿದಂತೆ ವಿಶೇಷವಾಗಿ ತಮ್ಮ ಜೀವನದ ಹಂಗನ್ನು ತೊರೆದು ಹಗಲಿರುಳು ರೋಗಿಗಳ ಸೇವೆಯಲ್ಲಿ ತಮ್ಮನ್ನು ತೊಡಗಿಸಿಕೊಂಡ ವೈದ್ಯರು ಹಾಗೂ ನರ್ಸ್‌ಗಳ ನಿಸ್ವಾರ್ಥ ಸೇವೆಯನ್ನು ಬಹಳ ಗೌರವದಿಂದ ಸ್ಮರಿಸುತ್ತದೆ ಎಂದು ಸದನದಲ್ಲಿ ತಿಳಿಸಿದರು.

ನಂತರ ಸಭಾ ನಾಯಕರಾದ ಕೋಟಾ ಶ್ರೀನಿವಾಸ ಪ್ರಜಾರಿ ಹಾಗೂ ವಿರೋಧ ಪಕ್ಷದ ನಾಯಕರಾದ ಎಸ್.ಆರ್. ಪಾಟೀಲ್ ಅವರು ಮೃತರುಗಳ ಆತ್ಮಕ್ಕೆ ಸದ್ಗತಿಯನ್ನು ಕೋರುತ್ತಾ ಅವರು ಅಗಲಿಕೆಯ ನೋವನ್ನು ಸಹಿಸುವ ಶಕ್ತಿಯನ್ನು ಅವರ ಕುಟುಂಬ ವರ್ಗಕ್ಕೆ ಪರಮಾತ್ಮನು ಕರುಣಿಸಲಿ ಎಂದು ಪ್ರಾರ್ಥಿಸಿದರು.

## ಪ್ರಾಣಿಗಳ ದತ್ತು ಸ್ವೀಕಾರ

ಬೆಂಗಳೂರು, ಸೆಪ್ಟೆಂಬರ್ 13, (ಕರ್ನಾಟಕ ವಾರ್ತೆ):

ಮೈಸೂರು ಶ್ರೀ ಚಾಮರಾಜೇಂದ್ರ ಮೃಗಾಲಯದ "ಪ್ರಾಣಿಗಳ ದತ್ತು ಸ್ವೀಕಾರ ಯೋಜನೆ" ಅಡಿಯಲ್ಲಿ, ಬೆಂಗಳೂರಿನ ದಕ್ಷ್‌ವಾದಿರಾಜ್ ಮತ್ತು ಆಶುತೋಷ್ ಅವರು "ಬ್ಲಾಕ್ ಪ್ಯಾಂಥರ್", ಮೈಸೂರಿನ ಯಸಸ್ವಿನಿ ಟಿ.ಆರ್ ಅವರು "ಮೊಟ್ಟೆಲ್ಡ್ ವುಡ್ ಔಲ್"ನ್ನು ಮೈಸೂರು ಮೃಗಾಲಯವು ನಿಗಧಿಪಡಿಸಿರುವ ಶುಲ್ಕವನ್ನು ಪಾವತಿಸಿ ದತ್ತು ಪಡೆದಿರುವುದಕ್ಕೆ ಅಭಿನಂದಿಸಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ವನ್ಯಪ್ರಾಣಿ ಸಪ್ತಾಹದ ಛಾಯಾಗ್ರಹಣ ಸ್ಪರ್ಧೆ ಮತ್ತು ಛಾಯಾಚಿತ್ರಗಳ ಪ್ರದರ್ಶನ

ಬೆಂಗಳೂರು, ಸೆಪ್ಟೆಂಬರ್ 13, (ಕರ್ನಾಟಕ ವಾರ್ತೆ):

ಮೈಸೂರು ಮೃಗಾಲಯವು ದಿನಾಂಕ 1ರಿಂದ 7ನೇ ಅಕ್ಟೋಬರ್ 2021ರ ವರೆಗೆ ಆಚರಿಸಲಿರುವ ವನ್ಯ ಪ್ರಾಣಿ ಸಪ್ತಾಹದ ಅಂಗವಾಗಿ ವನ್ಯಪ್ರಾಣಿ ಛಾಯಾಗ್ರಹಣ ಸ್ಪರ್ಧೆ ಮತ್ತು ಛಾಯಾಚಿತ್ರಗಳ ಪ್ರದರ್ಶನವನ್ನು ಹಮ್ಮಿಕೊಂಡಿದ್ದು, ವನ್ಯಜೀವಿ ಪ್ರವರ್ಗ ಹಾಗೂ ಮೃಗಾಲಯ ಪ್ರವರ್ಗ ಎಂಬ ಎರಡು ಪ್ರವರ್ಗಗಳಲ್ಲಿ ಹಮ್ಮಿಕೊಂಡಿದೆ.

ಪ್ರತಿ ಪ್ರವರ್ಗಕ್ಕೆ ಮೌಂಟ್ ಮಾಡಿರುವ 12" X 18" ಅಳತೆಯ ತಲಾ 2 ಛಾಯಾಚಿತ್ರಗಳನ್ನು ಮಾತ್ರ ಸ್ಪರ್ಧೆಗೆ ಅಂಗೀಕರಿಸಲಾಗುವುದು. ಸ್ಪರ್ಧೆಯ ಪ್ರತಿ ಪ್ರವರ್ಗಕ್ಕೆ ಪ್ರವೇಶ ಶುಲ್ಕ ರೂ 100-00(ರೂಪಾಯಿ ಒಂದು ನೂರು ಮಾತ್ರ) ಗಳನ್ನು ನಿಗದಿಪಡಿಸಲಾಗಿದೆ. ಪ್ರತಿ ಪ್ರವರ್ಗಕ್ಕೆ 3 ನಗದು ಬಹುಮಾನಗಳು ಮತ್ತು 4 ಪ್ರಮಾಣ ಪತ್ರಗಳನ್ನು ನೀಡಲಾಗುವುದು. ಈ ಹಿಂದೆ ಮೈಸೂರು ಮೃಗಾಲಯದಲ್ಲಿ ಪ್ರದರ್ಶಿಸಲಾದ ಛಾಯಾಚಿತ್ರಗಳನ್ನು ಸ್ಪರ್ಧೆಗೆ ಅಂಗೀಕರಿಸಲಾಗುವುದಿಲ್ಲ. ಪ್ರವೇಶಗಳನ್ನು ಸ್ವೀಕರಿಸಲು ಸೆಪ್ಟೆಂಬರ್ 22, 2021 ಕೊನೆಯ ದಿನವಾಗಿದ್ದು, ಸೆಪ್ಟೆಂಬರ್ 26ರಂದು ಬಹುಮಾನಿತರನ್ನು ಆಯ್ಕೆ ಮಾಡಲಾಗುವುದು. ಛಾಯಾಚಿತ್ರ ಪ್ರದರ್ಶನವನ್ನು ಅಕ್ಟೋಬರ್ 1ರಿಂದ 7ರ ವರೆಗೆ ನಡೆಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 0821-2440752 ಅಥವಾ ಮೊಬೈಲ್ ಸಂಖ್ಯೆ 9686668099ಗೆ ಕರೆ ಮಾಡಲು ಅಧಿಕೃತ ಪ್ರಕಟಣೆ ತಿಳಿಸಿದೆ.

## ಅಸ್ಕರ್ ಫರ್ನಾಂಡಿಸ್ ನಿಧನಕ್ಕೆ ತೀವ್ರ ಸಂತಾಪ

ಬೆಂಗಳೂರು, ಸೆಪ್ಟೆಂಬರ್ 13, (ಕರ್ನಾಟಕ ವಾರ್ತೆ):

ಮಾಜಿ ಕೇಂದ್ರ ಸಚಿವರಾದ ಅಸ್ಕರ್ ಫರ್ನಾಂಡಿಸ್ ನಿಧನರಾದರೆಂದು ತಿಳಿದು ನನಗೆ ಆಘಾತವಾಗಿದೆ ಎಂದು ಮಾಜಿ ಸಚಿವರು ಹಾಗೂ ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಬಾಬುರಾವ ಚಿಂಚನಸೂರ ಅವರು ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.

ಅಸ್ಕರ್ ಫರ್ನಾಂಡಿಸ್ ಅವರು ಒರ್ವ ಹಿರಿಯ ರಾಜಕೀಯ ಮುತ್ಸದಿಯಾಗಿದ್ದರು. ಇವರ ನಿಧನದಿಂದ ರಾಜ್ಯವು ಒಬ್ಬ ಸಜ್ಜನ ಮತ್ತು ದಕ್ಷ ರಾಜಕಾರಣಿಯನ್ನು ಕಳೆದುಕೊಂಡಿದೆ. ಇವರ ಆತ್ಮಕ್ಕೆ ಶಾಂತಿ ಸಿಗಲಿ ಮತ್ತು ಅವರ ಕುಟುಂಬಕ್ಕೆ ಅವರ ಅಗಲಿಕೆಯಿಂದ ಉಂಟಾಗಿರುವ ದುಃಖವನ್ನು ಭರಿಸುವ ಶಕ್ತಿಯನ್ನು ಭಗವಂತನು ನೀಡಲೆಂದು ಪ್ರಾರ್ಥಿಸಿದ್ದಾರೆ.

## ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ
## ಪರಿಸರ ಭವನ, ಬೆಂಗಳೂರು.

**ಬೆಂಗಳೂರು ನಗರದಲ್ಲಿ ಸ್ಥಾಪಿಸಿರುವ ನಿರಂತರ ಪರಿವೇಷ್ಟಕ ವಾಯುಗುಣಮಟ್ಟ ಮಾಪನ ಕೇಂದ್ರಗಳ ವಾಯುಗುಣಮಟ್ಟ ಸೂಚ್ಯಂಕ (AQI), ಬೆಂಗಳೂರು**

**ದಿನಾಂಕ: 13.9.2021 (Average of past 24 hours)**

| ಕ್ರಮ ಸಂಖ್ಯೆ | ಮಾಪನ ಕೇಂದ್ರಗಳ ಹೆಸರು | ವಾಯುಗುಣಮಟ್ಟ ಸೂಚ್ಯಂಕ (AQI) | ವರ್ಗ | ಪ್ರಮುಖ ಮಾಲಿನ್ಯಕಾರಕ |
|---|---|---|---|---|
| 1 | ಪಶುವೈದ್ಯಕೀಯಕಾಲೇಜು, ಹೆಬ್ಬಾಳ | 35 | ಉತ್ತಮ | CO |
| 2 | ಜಯನಗರ 5ನೇ ಬ್ಲಾಕ್, ಶಾಲಿನಿ ಮೈದಾನ | 34 | ಉತ್ತಮ | $PM_{10}$ |
| 3 | ಕವಿಕ, ಮೈಸೂರುರಸ್ತೆ | 34 | ಉತ್ತಮ | $PM_{10}$ |
| 4 | ರಾಜೀವ್‌ಗಾಂಧಿಎದೆರೋಗಗಳ ಸಂಸ್ಥೆ, ನಿಮ್ಹಾನ್ಸ್ ಹೊಂಬೆಗೌಡನಗರ | 104 | ಸಾಧಾರಣ | $PM_{10}$ |
| 5 | ಹೆಚ್.ಎಸ್.ಆರ್ ಲೇಔಟ್, ಕೇಂದ್ರರೇಷ್ಮೆ ಮಂಡಳಿ ಹತ್ತಿರ | 51 | ತೃಪ್ತಿಕರ | $PM_{10}$ |

| | | | | |
|---|---|---|---|---|
| 6 | ನಗರರೈಲ್ವೆ ನಿಲ್ದಾಣ, ಮೆಜೆಸ್ಟಿಕ್, ಬೆಂಗಳೂರು | 60 | ತೃಪ್ತಿಕರ | $PM_{10}$ |
| 7 | ಸಾಣೆಗುರುವನಹಳ್ಳಿ, ನಿಸರ್ಗ ಭವನ, ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಶಿವನಗರ | 38 | ಉತ್ತಮ | CO |
| **(13.9.2021 at 10.05 AM)** | | | | |
| 8 | BWSSB,ಕಾಡಬೀಸನಹಳ್ಳಿ | 42 | ಉತ್ತಮ | $PM_{10}$ |
| 9 | ಪೀಣ್ಯ | 49 | ಉತ್ತಮ | $PM_{10}$ |
| 10 | ಬಿಟಿಎಂ ಲೇಔಟ್ | 84 | ತೃಪ್ತಿಕರ | CO |

| ವರ್ಗ(ಶ್ರೇಣಿ) | ಉಂಟಾಗಬಹುದಾದಆರೋಗ್ಯ ಪರಿಣಾಮಗಳು |
|---|---|
| **ಉತ್ತಮ (0–50)** | ಕನಿಷ್ಠ ಪರಿಣಾಮ |
| **ತೃಪ್ತಿಕರ (51–100)** | ಸೂಕ್ಷ್ಮಜನರಿಗೆ ಸಣ್ಣ ಉಸಿರಾಟದ ಅಸ್ವಸ್ಥತೆ |
| **ಸಾಧಾರಣ (101–200)** | ಶ್ವಾಸಕೋಶ, ಹೃದಯಕಾಯಿಲೆಯವರು, ಮಕ್ಕಳು ಮತ್ತು ಹಿರಿಯ ವಯಸ್ಕರಿಗೆ ಉಸಿರಾಟದ ಅಸ್ವಸ್ಥತೆ |
| **ಕಳಪೆ (201–300)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಉಸಿರಾಟದ ಅಸ್ವಸ್ಥತೆ |
| **ಅತಿ ಕಳಪೆ (301–400)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಶ್ವಾಸಕೋಶದಅಸ್ವಸ್ಥತೆ |
| **ತೀವ್ರ (>401)** | ಆರೋಗ್ಯವಂತಜನರಿಗೂ ಉಸಿರಾಟದ ಅಸ್ವಸ್ಥತೆ |

**Karnataka State Pollution Control Board**
**ParisaraBhavan, Bengaluru**
**AQI of the CAAQM stations established in Bengaluru City**
**Date : 13.9.2021 (Average of past 24 hours)**

| Sl. No. | Station | AQI | Category | Prominent Pollutant |
|---|---|---|---|---|
| 1 | Veterinary College Hebbal | 35 | Good | CO |
| 2 | Jayanagar 5th Block, Shalini ground | 34 | Good | $PM_{10}$ |
| 3 | KAVIKA, Mysore Road | 34 | Good | $PM_{10}$ |
| 4 | Rajeev Gandhi Institute of Chest Disease, NIMHANS, Hombegowda Nagar | 104 | Moderate | $PM_{10}$ |
| 5 | HSR Layout, near Central Silkboard | 51 | Satisfactory | $PM_{10}$ |

| | | | | |
|---|---|---|---|---|
| 6 | City Railway Station, Magestic, Bengaluru | 60 | Satisfactory | $PM_{10}$ |
| 7 | Saneguruvanahalli, NisargaBhavan, KSPCB, Shivanagara | 38 | Good | CO |
| **(13.9.2021 at 10.05 AM)** | | | | |
| 8 | BWSSB, Kadabesanahalli | 42 | Good | $PM_{10}$ |
| 9 | Peenya | 49 | Good | $PM_{10}$ |
| 10 | BTM Layout | 84 | Satisfactory | CO |

| **Category (Range)** | **Possible Health Impacts** | **Category (Range)** | **Possible Health Impacts** |
|---|---|---|---|
| Good (0–50) | Minimal Impact | Poor (201–300) | Breathing discomfort to people on prolonged exposure |
| Satisfactory (51–100) | Minor breathing discomfort to sensitive people | Very Poor (301–400) | Respiratory illness to the people on prolonged exposure |
| Moderate (101–200) | Breathing discomfort to the people with lung, Heart disease, children and | Severe (>401) | Respiratory effects even on healthy people |